ಆ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧ್ಯಾದೇಶ 2006, ದಿನಾಂಕ 14 12 2006 ರಂದು ಜಾರಿಗೆ ಬಂದಿರುತ್ತದೆ ಸದರಿ ಅಧ್ಯಾದೇಶ ಜಾರಿಗೆ ಬರುವ ಮೊದಲು 2006–07ನೇ ಸಾಲಿಗೆ ಸಂಬಂಧಪಟ್ಟಂತೆ ಮಾಡಲಾದ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ, ವರ್ಗಾವಣೆ ಆದೇಶಗಳನ್ವಯ ಸಕ್ಷಮ ಪ್ರಾಧಿಕಾರವು ಜಿಲ್ಲಾ ಮಟ್ಟದಲ್ಲಿ/ ತಾಲ್ಲೂಕು ಮಟ್ಟದಲ್ಲಿ ಈಗಾಗಲೇ ವರ್ಗಾವಣೆ ಆದೇಶಗಳನ್ನು ಹೊರಡಿಸಿ ಅಂತಹ ಶಿಕ್ಷಕರುಗಳನ್ನು ಬಿಡುಗಡೆ ಮಾಡುವ ಪ್ರಕ್ರಿಯೆ ಮಾತ್ರ ಬಾಕಿಯಿದ್ದಲ್ಲಿ ಅಂತಹ ವರ್ಗಾವಣೆಗಳನ್ನು ಮಾತ್ರ ಜಾರಿಗೊಳಿಸಬಹುದಾಗಿದೆ ಎಂದು ಎಲ್ಲಾ ಆಯುಕ್ತರುಗಳಿಗೆ ಈಗಾಗಲೇ ದಿನಾಂಕ 21 12 2006 ರಂದು ಪತ್ರ ಮುಖೇನ ತಿಳಿಸಲಾಗಿದೆ ಸರ್ಕಾರದಿಂದ ಆದೇಶಿಸಿದ/ ಅನುಮತಿಸಿದ ಪ್ರಕರಣಗಳಲ್ಲಿ ಜಿಲ್ಲಾ ಮಟ್ಟದ ಸಕ್ಷಮ ಪ್ರಾಧಿಕಾರ ವರ್ಗಾವಣಾ ಆದೇಶ ಹೊರಡಿಸದೇ ಇರುವುದರಿಂದ ಅಂತಹ ಪ್ರಕರಣಗಳಲ್ಲಿ ವರ್ಗಾವಣಾ ಆದೇಶಗಳನ್ನು ಜಾರಿಗೊಳಿಸುವುದು ದಿನಾಂಕ 14 12 2006ರ ಅಧ್ಯಾದೇಶದನ್ವಯ ಉಲ್ಲಂಘನೆಯಾಗುವುದು

ಇ) 2006–07ನೇ ಸಾಲಿನಲ್ಲಿ ವರ್ಗಾವಣೆಗೊಂಡ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು 10053 ಹಾಗೂ ಪ್ರೌಢ ಶಾಲಾ ಸಹಶಿಕ್ಷಕರ ಸಂಖ್ಯೆ–6973

ಈ) ಮೇಲಿನ 'ಆ' ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

1050 (1189) ಶ್ರೀ ಅಕ್ಕಿ ಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮವೇನು,

ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳ (ಆಸ್ಪತ್ರೆ) ದುರಸ್ಥಿಗೆ ಸರ್ಕಾರ ಮೀಸಲಿಟ್ಟಿರುವ ಹಣವೆಷ್ಟು,

ಇ) ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು,

ಈ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ಆಯಾಗಳ ಹುದ್ದೆಗಳೆಷ್ಟು? ಸರ್ಕಾರ ಈ ಹುದ್ದೆಗಳನ್ನು ತುಂಬಲು ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಆರ್ ಅಶೋಕ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಖಾಯಂ ಆಗಿ 500 ವೈದ್ಯಾಧಿಕಾರಿ ಹುದ್ದೆಗಳನ್ನು ಎರಡು ಹಂತಗಳಲ್ಲಿ ವಿಶೇಷ ನೇಮಕಾತಿ ನಿಯಮಗಳ ಅಡಿ ಭರ್ತಿ ಮಾಡಲು ಅನುಮತಿ ನೀಡಿದ್ದು, ಇದರಲ್ಲಿ ಮೊದಲ ಹಂತವಾಗಿ 250 ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ ಎರಡನೇ ಹಂತದಲ್ಲಿ 250 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ

ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳ ದುರಸ್ಥಿಗೆ ಪ್ರಸಕ್ತ ಸಾಲಿನಲ್ಲಿ 537 83 ಲಕ್ಷ ರೂ ಗಳನ್ನು ಮಂಜೂರು ಮಾಡಲಾಗಿದೆ

ಇ) ಕಳೆದ 2 ವರ್ಷಗಳಲ್ಲಿ ಅಂದರೆ 2005–06ನೇ ಸಾಲಿನಲ್ಲಿ 517 54 ಲಕ್ಷ ರೂ ಗಳು ಹಾಗೂ 2004–05ರಲ್ಲಿ 498 82 ಲಕ್ಷ ರೂ ಗಳನ್ನು ಬಿಡುಗಡೆ ಮಾಡಲಾಗಿದೆ

ಈ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಆಯಾಗಳ ಹುದ್ದೆಗಳು ಇರುವುದಿಲ್ಲ ಗ್ರೂಪ್ ಡಿ ಹುದ್ದೆಗಳೆಂದು ಮಂಜೂರಾಗಿರುತ್ತದೆ ಈ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುವ ಮಹಿಳಾ ನೌಕರರಿಗೆ ಆಯಾ ಎಂದು ಕರೆಯುತ್ತಾರೆ

ಗ್ರೂಪ್ ಡಿ ಹುದ್ದೆಗಳನ್ನು ನೇಮಕಾತಿ ಮಾಡಬಾರದೆಂದು ನಿರ್ಬಂಧ ವಿಧಿಸಲಾಗಿದೆ ಶೇಕಡಾ 30 ರಷ್ಟು ಹುದ್ದೆಗಳನ್ನು ಖಾಲಿ ಇಟ್ಟುಕೊಂಡು 'ನಾನ್ ಕ್ಲಿನಿಕಲ್ ಸೌಲಭ್ಯದಡಿ' ಆಸ್ಪತ್ರೆಯನ್ನು ಶುಚಿತ್ವವಾಗಿಡಲು ಹೊರಗುತ್ತಿಗೆ ನೀಡಲಾಗುತ್ತಿದೆ